ಟೆಂಡರ್ ಅನುಮೋದನೆ ಅಧಿಕಾರವನ್ನು ಸರ್ಕಾರಕ್ಕೆ, ನಿರ್ದೇಶನಾಲಯಕ್ಕೆ, ಜಿಲ್ಲಾಧಿಕಾರಿಗಳಿಗೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ನೀಡುವ ಮೂಲಕ ಅಧಿಕಾರವನ್ನು ವಿಕೇಂದ್ರಿಕರಣಗೊಳಿಸಿದೆ.

5. ಸರ್ಕಾರದ ಅಧಿಸೂಚನೆ ಸಂಖ್ಯೆ: ಯುಡಿಡಿ 98 ಟಿಎಂಎಸ್ 02 ದಿನಾಂಕ: 20.12.02 ರನ್ವಯ ಕರ್ನಾಟಕ ಮುನಿಸಿಪಾಲಿಟಿಗಳ (Preparation of Plans and Estimates and Execution of Municipal Works) (Amendment) ರೂಲ್ಸ್ 02 ರನ್ವಯ ತಿದ್ದುಪಡಿ ತಂದು ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಅಧಿಕಾರವನ್ನು ಸರ್ಕಾರಕ್ಕೆ, ನಿರ್ದೇಶಕರಿಗೆ, ಜಿಲ್ಲಾಧಿಕಾರಿಗಳಿಗೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ನೀಡುವ ಮೂಲಕ ಅಧಿಕಾರವನ್ನು ವಿಕೇಂದ್ರಿಕರಣಗೊಳಿಸಲಾಗಿದೆ.

ಮಂಡ್ಯ ಜಿಲ್ಲೆಯಲ್ಲಿ ಕ.ರ.ಸಾ.ಸಂಸ್ಥೆಯ ವಿಭಾಗ ಪ್ರಾರಂಭ

752(1216) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ಕ.ರಾ.ರ.ಸಾ. ಸಂಸ್ಥೆಯ ವಿಭಾಗವನ್ನು ಆರಂಭಿಸುವ ಅಗತ್ಯತೆಯನ್ನು ಸರ್ಕಾರವು ಮನಗಂಡಿದೆಯೇ;

ಆ) ಹಾಗಿದ್ದಲ್ಲಿ, ಈ ಬಗೆಗಿನ ಕ್ರಮಗಳೇನು?

ಶ್ರೀ ಬಿ. ರಮಾನಾಥ ರೈ (ಸಾರಿಗೆ ಸಚಿವರು)

ಅ) ಹೌದು.

ಆ) ಮಂಡ್ಯದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗ ಕಛೇರಿಯನ್ನು ಶೀಘ್ರದಲ್ಲಿಯೇ ಪ್ರಾರಂಭಿಸಲಾಗುವುದು

ರಾಜ್ಯದಲ್ಲಿನ ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿ

753(1217) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿನ ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿಯಲ್ಲಿನ ಅನೇಕ ಅಂಶಗಳಿಗೆ ಸಾರ್ವಜನಿಕರಿಂದ, ನಗರ ಹಾಗೂ ಪುರಸಭೆಗಳಿಂದ ಪ್ರತಿರೋಧ ವ್ಯಕ್ತವಾಗುತ್ತಾ ಇರುವುದನ್ನು ಸರ್ಕಾರ ಗಮನಿಸಿದೆಯೇ?

ಆ) ಹಾಗಿದ್ದಲ್ಲಿ, ಇದನ್ನು ಪರಿಷ್ಕರಿಸಬೇಕಾದ ಅವಶ್ಯಕತೆಯನ್ನು ಸರ್ಕಾರ ಮನಗಂಡಿದೆಯೇ?

ಇ) ಪರಿಷ್ಕರಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ) ಗಮನಿಸಿದೆ.

ಆ) ಹೌದು, ಸ್ವಲ್ಪ ಮಟ್ಟಿಗೆ,

ಇ) ಕಟ್ಟಡಗಳಿಗೆ ಸಂಬಂಧಿಸಿದಂತೆ ನೀಡಲಾಗಿರುವ ಸೂಚನೆಗಳು ಸ್ಪಷ್ಟವಾಗಿವೆ. ಆದರೆ ಖಾಲಿ ನಿವೇಶನಗಳಿಗೆ ಸಂಬಂಧಿಸಿದಂತೆ ತೆರಿಗೆ ಕಡಿಮೆ ಮಾಡಲು ಕಾನೂನಿಗೆ ಸೂಕ್ತ ತಿದ್ದುಪಡಿಯನ್ನು ಸದ್ಯದಲ್ಲೇ ತರಲಾಗುತ್ತಿದೆ.